ಅ) ಟಿ. ನರಸೀಪುರ ತಿರುಮಕೂಡಲ್ಲು ಪ್ರದೇಶವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡುವ ಬಗ್ಗೆ ಸರ್ಕಾರದವರು ಆಲೋಚಿಸುತ್ತಿದ್ದಾರೆಯೇ ?

ಆ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು ?

ಇ) ಇದಕ್ಕೆ ಸಂಬಂಧಿಸಿದಂತೆ ಎಷ್ಟು ಹಣ ಖರ್ಚು ಮಾಡಲಾಗುವುದು ?

ಶ್ರೀ ಜೀವರಾಜ ಆಳ್ವ (ವಾರ್ತಾ, ಯುವಜನ ಸೇವಾ ಕ್ರೀಡಾ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವೈದ್ಯಕೀಯ ಸೌಲಭ್ಯಗಳು ದೊರೆಯದಿರುವುದು.

೧೭೬೨. **ಶ್ರೀ ಬಿ. ನಾರಾಯಣ ಸ್ವಾಮಿ** (ಬಾಗೇಪಲ್ಲಿ).—ಮಾನ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಾಗೇಪಲ್ಲಿ ತಾಲ್ಲೂಕು ಸಜ್ಜಾವಾರ ಗ್ರಾಮದ ಬಾವಿಯಲ್ಲಿ ಸೊಪ್ಪು ಸಿಡಿದ ಸ್ಥಳದಲ್ಲಿಯೇ ಇಬ್ಬರು ಮೃತರಾಗಿ ಉಳಿದ ೧೦ ಜನರಿಗೆ ತೀವ್ರಗಾಯಗಳಿಗೊಳಗಾದವರನ್ನು ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ತೆಗೆದುಕೊಂಡು ಬಂದಾಗ ಯಾವ ವೈದ್ಯರೂ ಇರದೆ ಗಾಯಾಳುಗಳು ತೊಂದರೆ ಅನುಭವಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸ್ಥಳೀಯ ಶಾಸಕರಿಂದ ಸರ್ಕಾರದವರಿಗೆ, ವಿಷಯ ತಿಳಿಸಿದ್ದರೂ, ಅಂತಹವರ ಮೇಲೆ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು ?

ಶ್ರೀ ಹೆಚ್. ಎಲ್. ತಿಮ್ಮೇಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).—

ಅ) ಬಂದಿದೆ.

ಆ) ಈ ವಿಚಾರದಲ್ಲಿ ಇಲಾಖಾ ತನಿಖೆಗೆ ವ್ಯವಸ್ಥೆ ಮಾಡಲಾಗಿದೆ ಮತ್ತು ಈ ಬಗ್ಗೆ ವಿಚಾರಣಾ ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು,

ಜಿಲ್ಲಾ ಮುಖ್ಯ ಕೇಂದ್ರದಲ್ಲಿ ರಂಗ ಮಂದಿರ ನಿರ್ಮಿಸುವುದು.

೧೭೬೩. **ಶ್ರೀ ಸಿ. ಎನ್. ಭಾಸ್ಕರಪ್ಪ** (ಬೆಳ್ಳಾವಿ).—ಮಾನ್ಯ ವಾರ್ತಾ, ಯುವ ಜನ ಸೇವಾ, ಕ್ರೀಡಾ ಹಾಗೂ ಪ್ರವಾಸೋದ್ಯಮ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಸರ್ಕಾರದ ವತಿಯಿಂದ ರಂಗಮಂದಿರ ನಿರ್ಮಿಸುವ ಯೋಜನೆಯಂತೆ ತುಮಕೂರಿನಲ್ಲಿ ನಿರ್ಮಿಸಲು ಯೋಜಿಸಲಾಗಿರುವ ರಂಗಮಂದಿರದ ಕಾಮಗಾರಿಯು ಎಷ್ಟರಮಟ್ಟಿಗೆ ಪ್ರಗತಿಯಲ್ಲಿದೆ ಎಂಬುದನ್ನು ತಿಳಿಸುವುದು ;

ಆ) ಸಾರ್ವಜನಿಕ ಅಭಿಪ್ರಾಯವನ್ನು ಸಂಗ್ರಹಿಸಿಕೊಡುವುದು ಕಷ್ಟವಾಗಿ ಆಗಾಗ್ಗೆ ವಿಳಂಬವಾಗುವುದರಿಂದ ಅಧಿಕ ವೆಚ್ಚವಾಗುವುದರಿಂದ ಸರ್ಕಾರದವರೇ ಪೂರ್ಣ ಹಣ ನೀಡಿ ಶೀಘ್ರವೇ ನಿರ್ಮಿಸುವ ಯೋಜನೆ ಇದೆಯೇ ?

ಶ್ರೀ ಜೀವರಾಜ ಆಳ್ವ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ರಾಜ್ಯ ಸಚಿವರು).—

ಅ) ೧೮ ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ ನಿರ್ಮಾಣ ಕಾರ್ಯ ಪ್ರಾರಂಭವಾಗಲಿದೆ ಟೆಂಡರ್‌ಗಳನ್ನು ಸ್ವೀಕರಿಸಲಾಗಿದೆ. ನಿರ್ಮಾಣ ಕಾರ್ಯ ಪೂರೈಸುವ ಬಗ್ಗೆ ಪರಿಶೀಲನೆಯಲ್ಲಿದೆ.

ಆ) ಇಲ್ಲ.